All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

25.02.2026 6.40 p.m.

***************

ಮುಖ್ಯಾಂಶಗಳು

- ವಂಚಿತರಿಗೆ ಸಮಾನ ಅವಕಾಶ ದೊರೆತಾಗ ಸಮಾಜದಲ್ಲಿ ನೈಜ ಬದಲಾವಣೆ ಸಾಧ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಕುಸುಮ ಸಂಜೀವಿನಿ ಅಭಿಯಾನ ಮತ್ತು ೧೦೮ ಅಂಬ್ಯೂಲೆನ್ಸ್ ಸೇವೆಗಳಿಗೆ ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ
- ಭಾರತಕ್ಕೆ ವಿದ್ಯುತ್ ಚಾಲಿತ ವಾಹನಗಳ ಜಾಗತಿಕ ಕೇಂದ್ರವಾಗುವ ಸಾಮರ್ಥ್ಯವಿದೆ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
- ಶಿವಮೊಗ್ಗ ಆಕಾಶವಾಣಿ ಕೇಂದ್ರದಲ್ಲಿ ನಾಳೆ ೧೦ ಕಿಲೋವ್ಯಾಟ್ ಸಾಮರ್ಥ್ಯದ ಟ್ರಾನ್ಸ್‌ಮೀಟರ್ ಉದ್ಘಾಟಿಸಲಿರುವ ಕೇಂದ್ರ ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್

***************

ಅವಕಾಶಗಳಿಂದ ವಂಚಿತರಾದವರಿಗೆ ಸಮಾನ ಅವಕಾಶಗಳನ್ನು ಕಲ್ಪಿಸಿಕೊಟ್ಟಾಗ ಮಾತ್ರ ಸಮಾಜದಲ್ಲಿ ನೈಜ ಬದಲಾವಣೆ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ.

ಕಾರ್ಕಳದ ಕುಕ್ಕುಂದೂರಿನಲ್ಲಿ ಕಿಸಾನ್ ಸಭಾ ಟ್ರಸ್ಟ್‌ನ ಮಹಾತ್ಮಾ ಗಾಂಧಿ ವಸತಿ ಪ್ರೌಢ ಶಾಲೆಯ ನೂತನ ಸಭಾಂಗಣ ಉದ್ಘಾಟಿಸಿ ಹಾಗೂ ಶಾಲೆಯ ೩೫ನೇ ವರ್ಷದ ಸಂಭ್ರಮೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾನ ಶಿಕ್ಷಣ ಮತ್ತು ಮುಕ್ತ ಅವಕಾಶಗಳು ದೊರೆತರೆ ಪ್ರತಿಯೊಬ್ಬರೂ ಬುದ್ಧಿವಂತರಾಗಲು ಸಾಧ್ಯವಿದ್ದು, ಈ ನಿಟ್ಟಿನಲ್ಲಿ ಶೈಕ್ಷಣಿಕ ಸಂಸ್ಥೆಗಳ ಪಾತ್ರ ಹಿರಿದಾದುದು ಎಂದು ಅವರು ಅಭಿಪ್ರಾಯಪಟ್ಟರು.

ಸರ್ಕಾರದ ಸಾಧನೆಗಳ ಕುರಿತು ಮಾತನಾಡಿದ ಮುಖ್ಯಮಂತ್ರಿ, ೨೦೨೩ರ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದ್ದ ೫೯೦ ಭರವಸೆಗಳ ಪೈಕಿ ಕೇವಲ ಎರಡು ವರ್ಷ ಒಂಬತ್ತು ತಿಂಗಳ

ಅವಧಿಯಲ್ಲಿ ೨೪೩ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆದಿದ್ದೇವೆ ಎಂದು ತಿಳಿಸಿದರು.

ರಾಜ್ಯದ ಬಡವರ ಮತ್ತು ಮಹಿಳೆಯರ ಆರ್ಥಿಕ ಸಬಲೀಕರಣಕ್ಕಾಗಿ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ಇದುವರೆಗೆ ಸುಮಾರು ೧ ಲಕ್ಷದ ೨೦ ಸಾವಿರ ಕೋಟಿ ರೂಪಾಯಿಗಳನ್ನು ವ್ಯಯಿಸಲಾಗಿದೆ. ಗ್ಯಾರಂಟಿ ಯೋಜನೆಗಳ ಅನುಷ್ಠಾನದ ನಡುವೆಯೂ ರಾಜ್ಯದ ಅಭಿವೃದ್ಧಿ ಕೆಲಸಗಳಿಗೆ ಯಾವುದೇ ಅಡ್ಡಿಯಾಗದಂತೆ ಸರ್ಕಾರ ಸಮತೋಲನ ಕಾಯ್ದುಕೊಂಡಿದೆ ಎಂದು ಅವರು ಸ್ಪಷ್ಟಪಡಿಸಿದರು.

ಧ್ವನಿ: ಸಿದ್ದರಾಮಯ್ಯ

****************

ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯದಲ್ಲಿ ಇಂದು ನಡೆದ ವಿಶೇಷ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಹತ್ವಾಕಾಂಕ್ಷೆಯ ಯೋಜನೆಗಳಾದ ಹೀಮೋಫಿಲಿಯಾ ರೋಗಿಗಳಿಗೆ ಉಚಿತ ತಡೆಗಟ್ಟುವ ಚಿಕಿತ್ಸೆ ನೀಡುವ 'ಕುಸುಮ ಸಂಜೀವಿನಿ' ಅಭಿಯಾನ ಮತ್ತು ಹೊಸದಾಗಿ ವಿನ್ಯಾಸಗೊಳಿಸಲಾದ ೧೦೮ ಅಂಬ್ಯುಲೆನ್ಸ್ ಸೇವೆಗಳಿಗೆ ಚಾಲನೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಹೀಮೋಫಿಲಿಯಾ ರೋಗಿಗಳಿಗೆ ಪ್ರತಿ ತಿಂಗಳು ಸುಮಾರು ೫೦ ಸಾವಿರ ರೂಪಾಯಿಗಳ ಚಿಕಿತ್ಸಾ ವೆಚ್ಚವಾಗುತ್ತಿದ್ದು, ಬಡ ಕುಟುಂಬಗಳಿಗೆ ಈ ಹೊರೆಯಿಂದ ಮುಕ್ತಿ ನೀಡಲು ಸರ್ಕಾರವು ಈ ಮಹತ್ವದ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಕುರಿತು ಪ್ರಸ್ತಾಪಿಸಿದ ಅವರು, ಗ್ಯಾರಂಟಿ ಯೋಜನೆಗಳ ಅನುಷ್ಠಾನವು ರಾಜ್ಯದ ಬೊಕ್ಕಸದ ಮೇಲೆ ಆರ್ಥಿಕ ಹೊರೆಯಾಗಿ ಪರಿಣಮಿಸಿರುವುದು ನಿಜವಾದರೂ, ಸಾರ್ವಜನಿಕರು ಆರ್ಥಿಕ ಸಂಕಷ್ಟದಿಂದ ಅನುಭವಿಸುವ ಮಾನಸಿಕ ಒತ್ತಡವನ್ನು ನಿವಾರಿಸುವುದು ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಪ್ರತಿಪಾದಿಸಿದರು.

ಆರೋಗ್ಯ ಕ್ಷೇತ್ರದಲ್ಲಿ ಕರ್ನಾಟಕವು ದೇಶದಲ್ಲೇ ಮುಂಚೂಣಿಯಲ್ಲಿದೆ ಎಂದ ಅವರು, ರಾಜ್ಯದಲ್ಲಿ ೭೦ಕ್ಕೂ ಹೆಚ್ಚು ವೈದ್ಯಕೀಯ ಕಾಲೇಜುಗಳಿದ್ದು, ಪ್ರತಿ ವರ್ಷ ಸಾವಿರಾರು ವೈದ್ಯರು ತರಬೇತಿ ಪಡೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

****************

ಸ್ಪಷ್ಟ ನೀತಿ ನಿರ್ದೇಶನ ಮತ್ತು ಹೆಚ್ಚಿನ ಕೈಗಾರಿಕಾ ಭಾಗವಹಿಸುವಿಕೆಯೊಂದಿಗೆ ಭಾರತ, ವಿದ್ಯುತ್ ಚಾಲಿತ ವಾಹನಗಳ ಉತ್ಪಾದನೆ ಮತ್ತು ನಾವೀನ್ಯತೆಯ ಪ್ರಮುಖ ಜಾಗತಿಕ ಕೇಂದ್ರವಾಗಿ ಹೊರಹೊಮ್ಮುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ದೆಹಲಿಯಲ್ಲಿ ನಡೆದ ವಿದ್ಯುತ್ ಚಾಲಿತ ವಾಹನಗಳ ಕುರಿತಾದ ಮೂರನೇ ಎಫ್‌ಐಸಿಸಿಐ ರಾಷ್ಟ್ರೀಯ ಸಮ್ಮೇಳನದ ಹಿನ್ನೆಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿದ್ಯುತ್ ಚಾಲಿತ ಸಂಚಾರ ವ್ಯವಸ್ಥೆಯ ಅಳವಡಿಕೆಯ ಉತ್ತೇಜಿಸುವ ಮಾರ್ಗವನ್ನು ಆರಿಸಿ ಮುನ್ನಡೆಯಲಾಗುವುದು.

ವಿಕಸಿತ ಭಾರತ ೨೦೨೪ರ ಧ್ಯೇಯದ ಸಾಕಾರಕ್ಕೆ ವಿದ್ಯುತ್ ಚಾಲಿತ ಸಂಚಾರ ವ್ಯವಸ್ಥೆ ಮೇಕ್ ಇನ್ ಇಂಡಿಯಾ ಧ್ಯೇಯದ ಕೇಂದ್ರ ಬಿಂದುವಾಗಿರಬೇಕು. ಸ್ಥಳೀಯ ಉತ್ಪಾದನೆಯನ್ನು ಬಲಪಡಿಸುವ ಜೊತೆಗೆ ಸ್ಥಳೀಯತೆಯನ್ನು ಹೆಚ್ಚಿಸಿ ವಿದ್ಯುತ್‌ಚಾಲಿತ ವಾಹನಗಳು, ಬ್ಯಾಟರಿ ಮತ್ತು ನಿರ್ಣಾಯಕ ಘಟಕಗಳಿಗೆ ಜಾಗತಿಕ ಉತ್ಪಾದನಾ ಕೇಂದ್ರವಾಗಿ ಭಾರತವನ್ನು ಇರಿಸಬೇಕಿದೆ ಎಂದು ತಿಳಿಸಿದ್ದಾರೆ.

ಕಳೆದ ದಶಕದಲ್ಲಿ ಭಾರತದ ಆಟೋಮೋಟಿವ್ ಘಟಕ ರಫ್ತುಗಳು ೮ ಶತಕೋಟಿ ಡಾಲರ್‌ನಿಂದ ೧೭.೯ ಶತಕೋಟಿ ಡಾಲರ್‌ಗೆ ದ್ವಿಗುಣಗೊಂಡಿದೆ ಎಂದು ಮಾಹಿತಿ ನೀಡಿದರು.

****************

ಬೆಳಗಾವಿ ಜಿಲ್ಲೆಯ ಘಟಪ್ರಭಾ ಕಾಲುವೆಗೆ ಅಡ್ಡಲಾಗಿ ನಿರ್ಮಿಸಲಾಗಿದ್ದ ಸೇತುವೆ ನೆಲಸಮ ಮಾಡಲಾಗಿದ್ದು, ನೂತನ ಸೇತುವೆಯನ್ನು ೪೫ ದಿನಗಳೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಕಟ್ಟು ನಿಟ್ಟಿನ ಸೂಚನೆ ನೀಡಿದ್ದಾರೆ.

ಸಂಕೇಶ್ವರ-ಯರಗಟ್ಟಿ ರಾಜ್ಯ ಹೆದ್ದಾರಿಯ ಘಟಪ್ರಭಾ ಪಟ್ಟಣದ ಸಮೀಪ, ಘಟಪ್ರಭಾ ಕಾಲುವೆಗೆ ಅಡ್ಡಲಾಗಿ ನಿರ್ಮಿಸಲಾಗಿದ್ದ ಹಳೆಯ ಸೇತುವೆ ಗಂಭೀರ ಬಿರುಕು ಬಿಟ್ಟ ಪರಿಣಾಮ ಸಂಚಾರಕ್ಕೆ ಯೋಗ್ಯವಲ್ಲದ ಸ್ಥಿತಿಗೆ ತಲುಪಿರುವುದರಿಂದ ಅದನ್ನು ನೆಲಸಮ ಮಾಡಲಾಗಿದ್ದು, ಈ ಹಿನ್ನೆಲೆಯಲ್ಲಿ ಇಂದು ಸ್ಥಳಕ್ಕೆ ಭೇಟಿ ನೀಡಿ, ಪರಿಸ್ಥಿತಿಯನ್ನು ಪರಿಶೀಲಿಸಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಾರ್ವಜನಿಕರ ಸುರಕ್ಷತೆಯನ್ನು ಪ್ರಥಮ ಆದ್ಯತೆಯಾಗಿ ಪರಿಗಣಿಸಿ, ಅಂದಾಜು ೫ ಕೋಟಿ ರೂಪಾಯಿ ವೆಚ್ಚದಲ್ಲಿ ನೂತನ ಸೇತುವೆ ನಿರ್ಮಾಣ ಕಾರ್ಯವನ್ನು ೪೫ ದಿನಗಳೊಳಗೆ ಪೂರ್ಣಗೊಳಿಸಬೇಕು. ಇದೇ ವೇಳೆ, ದಿನನಿತ್ಯದ ವಾಹನ ಸಂಚಾರಕ್ಕೆ ಯಾವುದೇ ಅಡೆತಡೆ

ಉಂಟಾಗದಂತೆ ತಾತ್ಕಾಲಿಕ ಸೇತುವೆ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದ್ದು, ಅದನ್ನೂ ಒಂದು ವಾರದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

****************

ಶಿವಮೊಗ್ಗ ಸೇರಿದಂತೆ ಸುತ್ತಮುತ್ತಲಿನ ೮ ಜಿಲ್ಲೆಗಳಿಗೆ ತನ್ನ ಪ್ರಸಾರ ವ್ಯಾಪ್ತಿಯನ್ನು ವಿಸ್ತರಿಸುತ್ತಿರುವ ಆಕಾಶವಾಣಿಯ ೧೦ ಕಿಲೋವ್ಯಾಟ್ ಸಾಮರ್ಥ್ಯದ 'ಎಫ್‌ಎಂ ೧೦೧.೪ ಮೆಗಾಹರ್ಟ್ಸ್' ಪ್ರಸಾರ ಕೇಂದ್ರದ ಉದ್ಘಾಟನಾ ಸಮಾರಂಭ ನಾಳೆ ನಡೆಯಲಿದೆ.

ಶಿವಮೊಗ್ಗದ ವಿದ್ಯಾನಗರದಲ್ಲಿ ಎಫ್‌ಎಂ ಟ್ರಾನ್ಸ್‌ಮೀಟರ್ ಕೇಂದ್ರದಲ್ಲಿ ನಾಳೆ ಮಧ್ಯಾಹ್ನ ೧೨.೩೦ ಕ್ಕೆ ನಡೆಯಲಿರುವ ಸಮಾರಂಭದಲ್ಲಿ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್, ಈ ನೂತನ ಎಫ್‌ಎಂ ಕೇಂದ್ರವನ್ನು ಲೋಕಾರ್ಪಣೆಗೊಳಿಸಲಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಸಂಸದ ಬಿ.ವೈ.ರಾಘವೇಂದ್ರ, ೮-೧೦ ವರ್ಷಗಳ ಪ್ರಯತ್ನದ ಫಲವಾಗಿ ಎಫ್‌ಎಂ ರೇಡಿಯೋ ಉದ್ಘಾಟನೆಯಾಗುತ್ತಿದೆ. ಒಂದು ವರ್ಷದ ಹಿಂದೆ ಶಂಕುಸ್ಥಾಪನೆ ಮಾಡಲಾಗಿತ್ತು. ೧೦ ಎಂಬಿಹೆಚ್ ಸಾಮರ್ಥ್ಯದ ಟ್ರಾನ್ಸ್ ಮೀಟರ್ ಅಳವಡಿಸಲಾಗಿದೆ.

ಬೆಂಗಳೂರು ನಂತರ ಶಿವಮೊಗ್ಗ ಜಿಲ್ಲೆಯಲ್ಲಿ ಇದನ್ನು ಅಳವಡಿಸಲಾಗಿದೆ. ಕನ್ನಡಿಗರ ಮಾಧ್ಯಮವಾಗಿ, ಭದ್ರಾವತಿ-ಶಿವಮೊಗ್ಗ ಆಕಾಶವಾಣಿ ಎಫ್‌ಎಂ ಕೇಂದ್ರ ಮಧ್ಯ ಕರ್ನಾಟಕ ಭಾಗದ ೮-೧೦ ಜಿಲ್ಲೆಗಳಿಗೆ ವ್ಯಾಪಿಸಲಿದೆ ಎಂದರು.

ಧ್ವನಿ : ರಾಘವೇಂದ್ರ

ನಾಳೆ ನಡೆಯುವ ಸಮಾರಂಭದಲ್ಲಿ ಸಂಸದ ಬಿ.ವೈ.ರಾಘವೇಂದ್ರ, ರಾಜ್ಯ ಸಾಕ್ಷರತಾ ಮತ್ತು ಶಿಕ್ಷಣ ಸಚಿವ ಮಧುಬಂಗಾರಪ್ಪ, ಶಾಸಕರಾದ ಬಿ.ಕೆ.ಸಂಗಮೇಶ್ವರ್, ಗೋಪಾಲಕೃಷ್ಣ ಬೇಳೂರು, ಅರಗ ಜ್ಞಾನೇಂದ್ರ, ಚನ್ನಬಸಪ್ಪ, ಶಾರದಾ ಪೂರ್ಯ ನಾಯ್ಕ್, ಪ್ರಸಾರ ಭಾರತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗೌರವ್ ದ್ವಿವೇದಿ ಮತ್ತಿತರರು ಉಪಸ್ಥಿತರಿರುವರು.

****************

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ವಿವಿಧ ಇಲಾಖೆ ಹಾಗೂ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಜಿಲ್ಲೆಯ  ದೊಡ್ಡಬಳ್ಳಾಪುರದ ಮಾದಗೊಂಡನಹಳ್ಳಿ ರಸ್ತೆಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇದೇ ೨೭ರಂದು "ಉದ್ಯೋಗ ಮೇಳ" ಆಯೋಜಿಲಾಗಿದ್ದು ಉದ್ಯೋಗಾಕಾಂಕ್ಷಿಗಳು ಆನ್‌ಲೈನ್ ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ.

೧೦ನೇ ತರಗತಿಗಿಂತ ಕಡಿಮೆ, ೧೦ನೇ ತರಗತಿ, ಪಿಯುಸಿ, ಐಟಿಐ, ಡಿಪ್ಲೋಮಾ, ಇಂಜಿನಿಯರಿಂಗ್, ಪದವಿ ಹಾಗೂ ಸ್ನಾತಕೋತ್ತರ ಪದವಿ ಹೊಂದಿರುವ ಮತ್ತು ವಿವಿಧ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿ ಪಡೆದ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ. ಬಸವರಾಜು ತಿಳಿಸಿದ್ದಾರೆ.

****************

ಕೆಪಿಎಸ್ ಶಾಲೆಗಳನ್ನು ಮಾದರಿ ಶಾಲೆಗಳಾಗಿ ಪರಿವರ್ತಿಸುವ ಮೂಲಕ ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರದ ಉದ್ದೇಶವಾಗಿದ್ದು ಶಾಲೆಗಳಿಗೆ ಅಗತ್ಯವಿರುವ ಸೌಕರ್ಯ ಕುರಿತು ಪ್ರಸ್ತಾವನೆಯನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಸೂಚಿಸಿದ್ದಾರೆ.

ಹಾಸನ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಇಂದು ಕೆಡಿಪಿ ಸಭೆ ನಡೆಸಿ ಮಾತನಾಡಿದ ಅವರು, ಕೆಲವು ಹಳ್ಳಿಗಳಲ್ಲಿ ಕೇವಲ ೪ ರಿಂದ ೫ ಮಕ್ಕಳು ಮಾತ್ರ ಶಾಲೆಗೆ ಬರುತ್ತಿದ್ದು, ಶಿಕ್ಷಣದ ಗುಣಮಟ್ಟ ಕಡಿಮೆಯಾಗುತ್ತದೆ. ಉತ್ತಮ ಮೂಲಸೌಕರ್ಯ, ಅರ್ಹ ಶಿಕ್ಷಕರು ಹಾಗೂ ಪರಿಣಾಮಕಾರಿ ಬೋಧನೆ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಯೋಜನೆ ಜಾರಿಗೆ ತರಲಾಗುತ್ತಿದೆ ಎಂದು ತಿಳಿಸಿದರು.

********ಮುಕ್ತಾಯ********